**ಕರ್ನಾಟಕ ಸರ್ಕಾರ**

**ಜಿಲ್ಲಾಧಿಕಾರಿಗಳ ಕಾರ್ಯಾಲಯ, ಗುಲಬರ್ಗಾ**

ಸಂಖ್ಯೆ:ಕಂ/ಸಿಬ್ಬಂದಿ-1/85/2009-10 ದಿನಾಂಕ:18-01-2010

: ಪ್ರಕಟಣೆ :

**ವಿಷಯ: ಗುಲಬರ್ಗಾ ಜಿಲ್ಲೆ ಕಂದಾಯ ಇಲಾಖೆ- ಗ್ರಾಮ ಲೆಕ್ಕಾಧಿಕಾರಿ ಖಾಲಿ ಇರುವ ಹುದ್ದೆಗಳಿಗೆ ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಕುರಿತಂತೆ ಅಂತಿಮ ಆಯ್ಕೆ ಪಟ್ಟಿ ಪ್ರಕಟ ಪಡಿಸುವ ಬಗ್ಗೆ.**

ಉಲ್ಲೇಖ: ಈ ಕಾರ್ಯಾಲಯದ ಅಧಿಸೂಚನೆ ಸಮ ಸಂಖ್ಯೆ ದಿನಾಂಕ:01-10-2009

*****

ಗುಲಬರ್ಗಾ ಜಿಲ್ಲೆಯ ಕಂದಾಯ ಇಲಾಖೆಯಲ್ಲಿ ಖಾಲಿ ಇರುವ (114) ಗ್ರಾಮ ಲೆಕ್ಕಾಧಿಕಾರಿ ಹುದ್ದೆಗಳಿಗೆ ಈಗಾಗಲೇ ಅಭ್ಯರ್ಥಿಗಳ ಮೂಲ ದಾಖಲೆಗಳನ್ನು ಪರಿಶೀಲಿಸುವ ಕಾರ್ಯ ಪೂರ್ಣಗೊಂಡಿರುತ್ತದೆ.

ಆದ್ದರಿಂದ (114) ಅಭ್ಯರ್ಥಿಗಳ ಅಂತಿಮ ಆಯ್ಕೆ ಪಟ್ಟಿಯನ್ನು ಹಾಗೂ 100% ಕಾಯ್ದಿರಿಸಿದ ಪಟ್ಟಿಯನ್ನು ಈ ಮೂಲಕ ಪ್ರಕಟಿಸಲಾಗಿದೆ.

ಆಯ್ಕೆ ಪಟ್ಟಿಯಲ್ಲಿ ಸೇರ್ಪಡೆಯಾದ ಅಭ್ಯರ್ಥಿಗಳು ದಿನಾಂಕ:28-01-2010 ರಂದು ಜಿಲ್ಲಾಧಿಕಾರಿಗಳ ಕಾರ್ಯಾಲಯದ ಸಭಾಂಗಣದಲ್ಲಿ ಏರ್ಪಡಿಸಿರುವ ಕೌನ್ಸಲಿಂಗ್‌ಗೆ ಹಾಜರಾಗಲು ಸೂಚಿಸಲಾಗಿದೆ. ದಿನಾಂಕ: 28-01-2010 ರಂದೆ ಆಯ್ಕೆಯಾದ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡಿ, ಖಾಲಿ ಇರುವ ಗ್ರಾಮಲೆಕ್ಕಾಧಿಕಾರಿ ಹುದ್ದೆಗೆ ಸ್ಥಳ ನಿಯುಕ್ತಿಗೊಳಿಸಲಾಗುವುದು.

ಆದ್ದರಿಂದ ಆಯ್ಕೆಯಾದ ಅಭ್ಯರ್ಥಿಗಳು ಕೌನ್ಸಲಿಂಗ್ ದಿನಾಂಕ:28-01-2010 ರಂದು ಸಂಬಂಧಪಟ್ಟ ಮೂಲ ದಾಖಲೆಗಳೊಂದಿಗೆ ಹಾಜರಾಗತಕ್ಕದ್ದು. ಒಂದು ವೇಳೆ ಕೌನ್ಸಲಿಂಗ್ ದಿನದಂದು ಯಾವುದೇ ಅಭ್ಯರ್ಥಿಯು ಗೈರು ಹಾಜರಿದ್ದಲ್ಲಿ ಅಂತಹ ಅಭ್ಯರ್ಥಿಯವರನ್ನು ಯಾವುದೇ ಮುನ್ಸೂಚನೆ ನೀಡದೆ ಆಯ್ಕೆ ಪಟ್ಟಿಯಿಂದ ಅವರ ನೇಮಕಾತಿ ರದ್ದುಗೊಳಿಸಲಾಗುವುದು.

18/1/10

(ಡಾ: ವಿಶಾಲ್.ಆರ್)

**ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿಗಳು,**

**ಜಿಲ್ಲಾ ಆಯ್ಕೆ ಸಮಿತಿ, ಗುಲಬರ್ಗಾ**

ಪ್ರತಿಯನ್ನು:

1. ಮಾನ್ಯ ಪ್ರಾದೇಶಿಕ ಆಯುಕ್ತರು, ಗುಲಬರ್ಗಾ ವಿಭಾಗ, ಗುಲಬರ್ಗಾ ಇವರಿಗೆ ದಯಾಪರ ಮಾಹಿತಿಗಾಗಿ ಸಲ್ಲಿಸಲಾಗಿದೆ.
2. ಜಿಲ್ಲಾ ವಾರ್ತಾ ಅಧಿಕಾರಿಗಳು, ವಾರ್ತಾ ಇಲಾಖೆ, ಗುಲಬರ್ಗಾ ಇವರಿಗೆ ಕಳುಹಿಸುತ್ತಾ, ಸದರಿ ವಿಷಯನ್ನು ಪ್ರತಿಷ್ಠಿತ ದಿನ ಪತ್ರಿಕೆಗಳಲ್ಲಿ ಸರ್ಕಾರಕ್ಕೆ ಯಾವುದೇ ವೆಚ್ಚವಾಗದಂತೆ ಪ್ರಚುರ ಪಡಿಸಲು ಕೋರಲಾಗಿದೆ.